ಮಾನವ ಹಕ್ಕುಗಳ ದಿನಾಚರಣೆಗೆ ಚಾಲನೆ ನೀಡಿದ ನ್ಯಾಯಮೂರ್ತಿ ಕೆ. ಗುರುಪ್ರಸಾದ

ಗದಗ ಡಿಸೆಂಬರ 11: ಸಮಾಜದಲ್ಲಿ ಮಾನವ ಹಕ್ಕು ಉಲ್ಲಂಘನೆಯಂತಹ ಘಟನೆಗಳು ನಡೆದ ಒಂದು ವರ್ಷದೊಳಗೆ ಸಂಬಂಧಿಸಿದ ದಾಖಲೆಗಳೊಂದಿಗೆ ರಾಜ್ಯ ಅಥವಾ ರಾಷ್ಟ್ರೀಯ ಮಾನವ ಹಕ್ಕು ಆಯೋಗಕ್ಕೆ ದೂರು ದಾಖಲಿಸಿ ನ್ಯಾಯ ಕಂಡುಕೊಳ್ಳಬಹುದಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಅವರು ಹೇಳಿದರು.

ಗದಗ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ರವಿವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಆಶ್ರಯದಲ್ಲಿ ಜರುಗಿದ ಮಾನವ ಹಕ್ಕುಗಳ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಮಾನವ ಹಕ್ಕು ಆಯೋಗವು ನಿರಂತರವಾಗಿ ಕಾರ್ಯನಿರ್ವಹಿಸುತ್ತದೆ. ರಾಷ್ಟ್ರೀಯ ಮಾನವ ಹಕ್ಕು ಆಯೋಗದಲ್ಲಿ ಅಪಾರ ಜ್ಞಾನ ಹೊಂದಿದ ಐದು ಸದಸ್ಯರನ್ನು ನೇಮಕಗೊಳಿಸಲಾಗುತ್ತಿದೆ. ಇದರಲ್ಲಿ ಆಯೋಗದ ಅಧ್ಯಕ್ಷರನ್ನು ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳನ್ನು ಸರ್ಕಾರ ನೇಮಕ ಮಾಡುತ್ತದೆ. ಅದರಂತೆ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ಹೈಕೋರ್ಟ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳನ್ನು ಅಧ್ಯಕ್ಷರನ್ನಾಗಿ ಸರ್ಕಾರ ನೇಮಕಗೊಳಿಸಿ ಮಾನವ ಹಕ್ಕು ಉಲ್ಲಂಘನೆ ಪ್ರಕರಣ ಕುರಿತು ತನಖೆ ಹಾಗೂ ಸರ್ಕಾರಕ್ಕೆ ವರದಿ ಸಲ್ಲಿಸಲು ತಿಳಿಸಲಾಗಿದೆ ಎಂದರು. ಮಾನವ ಹಕ್ಕು ಪ್ರಕರಣಗಳು ಹೆಚ್ಚಾಗಿ ಸರ್ಕಾರಿ ಸಂಸ್ಥೆಗಳಲ್ಲಿ ಅದರಲ್ಲೂ ಪ್ರಮುಖವಾಗಿ ಪೊಲೀಸ ಇಲಾಖೆ, ಅರಣ್ಯ ಇಲಾಖೆ, ಕಾರಾಗೃಹಗಳಲ್ಲಿ ಕಂಡುಬರುತ್ತವೆ. ಮಾನವನಿಗೆ ಸಮಾಜದಲ್ಲಿ ಘನತೆಯಿಂದ ಜೀವಿಸಲು ಅಗತ್ಯವಿರುವ ಎಲ್ಲ ಕಾನೂನಾತ್ಮಕ ಹಕ್ಕುಗಳೂ ಸಹ ಮಾನವ

ಹಕ್ಕುಗಳಾಗಿವೆ. ಇವುಗಳಿಗೆ ಧಕ್ಕೆ ಬಂದಲ್ಲಿ ಆಯೋಗದಲ್ಲಿ ದೂರು ದಾಖಲಿಸಿ ನ್ಯಾಯ ಪಡೆಯಬೇಕು ಎಂದು ಹೇಳಿದರು.

1948 ಡಿಸೆಂಬರ್ 10 ರಂದು ವಿಶ್ವ ಸಂಸ್ಥೆಯಲ್ಲಿ ಮಾನವ ಹಕ್ಕು ದಿನಾಚರಣೆ ಜಾರಿಗೊಳಿಸಲಾಯಿತು. ವಿಶ್ವಸಂಸ್ಥೆಯ ಪಟ್ಟಿಯಲ್ಲಿ ಅಂದು 48 ಸದಸ್ಯ ರಾಷ್ಟ್ರಗಳಿದ್ದವು. ಪ್ರತಿ ವರ್ಷ ಮಾನವ ಹಕ್ಕು ದಿನಾಚರಣೆಯನ್ನು ಡಿಸೆಂಬರ್ 10 ರಂದು ಆಚರಣೆ ಮಾಡುತ್ತಾ ಮಾನವ ಹಕ್ಕುಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿ ವ್ಯಕ್ತಿ ಹುಟ್ಟಿನಿಂದ ಜೀವಿಸುವ ಸ್ವಾತಂತ್ರ್ಯ ಘನತೆಯ ಹಕ್ಕುಗಳನ್ನು ಮಾನವ ಹಕ್ಕುಗಳೆಂದು ವ್ಯಾಖ್ಯಾನಿಸಬಹುದು. ಅವುಗಳ ಉಲ್ಲಂಘನೆಗೆ ಕಾನೂನಿನಲ್ಲಿ ಶಿಕ್ಷೆ ನಗದಿಪಡಿಸಲಾಗಿದೆ ಎಂದರು. ಮಾನವ ಹಕ್ಕುಗಳ ಆಯೋಗವು ಉಲ್ಲಂಘನೆ ಪ್ರಕರಣಗಳ ಬಗ್ಗೆ ಕೂಲಂಕುಷವಾಗಿ ತನಖೆ ನಡೆಸಿ ಮಾನವ ಹಕ್ಕುಗಳ ಉಲ್ಲಂಘನೆ ಖಚಿತವಾದಲ್ಲಿ ಅವುಗಳ ಬಗ್ಗೆ ಸಂಪೂರ್ಣವಾದ ಶಿಫಾರಸ್ಸು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ ಅಲ್ಲಿಂದ ಶಿಫಾರಸ್ಸು ವರದಿಯನ್ನು ಅನುಷ್ಠಾನಗೊಳಿಸಲಾಗುವುದು ಎಂದು ಮಾನವ ಹಕ್ಕುಗಳ ಕುರಿತು ಸುದೀರ್ಘವಾಗಿ ವಿವರಣೆಯನ್ನು ಕೆ. ಗುರುಪ್ರಸಾದ ಅವರು ನೀಡಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಮಾತನಾಡಿ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳು 6 ಇವೆ. ಮಾನವ ಹಕ್ಕುಗಳು ತುಂಬಾ ಇವೆ. ಅವೆಲ್ಲವೂ ಸಹ ಮಾನವರು ಘನತೆಯಿಂದ ಜೀವಿಸಲು ಸಹಕಾರಿಯಾಗಿವೆ. ಈ ವರ್ಷದ ಮಾನವ ಹಕ್ಕುಗಳ ದಿನಾಚರಣೆ ಅಂಗವಾಗಿ ಘೋಷವಾಕ್ಯವನ್ನು ನೀಡಲಾಗಿದ್ದು " ಸಮಾನತೆ,ಸ್ವಾತಂತ್ರ್ಯ, ಎಲ್ಲರಿಗೂ ನ್ಯಾಯ ಒದಗಿಸೋಣ " ಎಂಬುದಾಗಿದೆ ಎಂದರು.

ಸಮಾಜದ ಪ್ರತಿ ನಾಗರೀಕನು ಮಾನವ ಹಕ್ಕುಗಳ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯವೆಂದು ತಿಳಿಯಬೇಕು. ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳು ಸಂಭವಿಸದಂತೆ ಅಥವಾ ಮರುಕಳಿಸದಂತೆ ಪ್ರಜ್ಞಾವಂತ ನಾಗರಿಕರಾಗಿ ನಾವೆಲ್ಲರೂ ಜಾಗೃತಿ ವಹಿಸಬೇಕಾಗಿದೆ ಎಂದು ಹೇಳಿದರು.

ಜೀವನದ ಸ್ವಾತಂತ್ರ್ಯದ ಸಮಾನತೆಯ ಮತ್ತು ವ್ಯಕ್ತಿಯ ಘನತೆಯ ಹಕ್ಕುಗಳೇ ಮಾನವ ಹಕ್ಕುಗಳು. ಎಲ್ಲ ಮಾನವ ಜೀವಿಗಳು ಹುಟ್ಟಿನಂದ ಘನತೆ ಮತ್ತು ಹಕ್ಕುಗಳಲ್ಲಿ ಸಮಾನರು ಮತ್ತು ಪ್ರತಿಯೊಬ್ಬರೂ ಯಾವುದೇ ತರಹದ ತಾರತಮ್ಯವಿಲ್ಲದ ಹಕ್ಕುಗಳನ್ನು ಮತ್ತು ಸ್ವಾತಂತ್ರವನ್ನು ಹೊಂದುವ ಕಾನೂನುಬದ್ಧ ಹಕ್ಕು ಹೊಂದಿರುತ್ತಾರೆ ಎಂದರು. ನಿವೃತ್ತ ನ್ಯಾಯಮೂರ್ತಿ ಎಸ್.ಜಿ. ಪಲ್ಲೇದ ಅವರು ಮಾತನಾಡಿ ಮಾನವ ಹಕ್ಕುಗಳ ರಕ್ಷಣೆ ಸಮಾಜದಲ್ಲಿ ಮಾನವ ಹಕ್ಕುಗಳ ಸಂರಕ್ಷಣೆಯಲ್ಲಿ ನಾಗರಿಕರ ಕರ್ತವ್ಯಗಳನ್ನು ಅರಿಯುವ ಜಾಗೃತಿ ಕಾರ್ಯಕ್ರಮ ಇದಾಗಿದೆ. ಮನುಷ್ಯ ಮನುಷ್ಯನನ್ನು ಪ್ರೀತಿ, ಗೌರವ , ಆದರ, ಘನತೆಯಿಂದ ಕಾಣುವುದು ಮಾನವ ಹಕ್ಕುಗಳ ರಕ್ಷಣೆಯಾಗುತ್ತದೆ. ದೌರ್ಜನ್ಯ ಎಸಗುವುದು ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ಈ ಮಾನವ ಹಕ್ಕುಗಳ ಉಲ್ಲಂಘನೆ ಮೊದಲು ಆರಂಭವಾಗುವುದೇ ಕುಟುಂಬ ಹಾಗೂ ನೆರೆಹೊರೆಯ ಸಮಾಜದಿಂದ. ನಾವೆಲ್ಲರೂ ಸಮಾಜದ ಸರ್ವರೊಂದಿಗೂ ಪ್ರೀತಿ, ವಿಶ್ವಾಸ, ಗೌರವದಿಂದ ನಡೆದುಕೊಳ್ಳುವ ಮೂಲಕ ಒಬ್ಬರಿಗೊಬ್ಬರು ಅನ್ಯೋನ್ಯದಿಂದ ಜೀವಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಮಾನವ ಹಕ್ಕುಗಳ ಪ್ರತಿಜ್ಞಾ ವಿಧಿಯನ್ನು ನೆರೆದ ಸಾರ್ವಜನಕರಿಗೆ, ಮಕ್ಕಳಿಗೆ, ಇಲಾಖೆಯ ಅಧಿಕಾರಿ, ಸಿಬ್ಬಂದಿಗಲಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್.ಅವರು ಬೋಧಿಸಿದರು. ಗದಗ ಬೆಟಗೇರಿ ನಗರಸಭೆಯ ಉಪಾಧ್ಯಕ್ಷೆ ಶ್ರೀಮತಿ ಸುನಂದಾ ಬಾಕಳೆ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಕಾರ್ಯಕ್ರಮ ನಿರ್ವಹಣೆಯನ್ನು ಮಂಜರಿ ಹೊಂಬಾಳಿ ನಡೆಸಿಕೊಟ್ಟರು.

ಭಕ್ತ ಕನಕದಾಸರ 536ನೇ ಜಯಂತಿ ಕಾರ್ಯಕ್ರಮ

ಮೂಡಲಗಿ:(ಹಕ್ಕ ಬುಕ್ಕ ವೇದಿಕೆ ಸುಣಧೋಳಿ)–ಸಣ್ಣಪುಟ್ಟ ಸಮಾಜವಿರಲಿ,ದೊಡ್ಡ ಸಮಾಜವಿರಲಿ. ಈ ಎಲ್ಲ ಸಮಾಜಗಳ ಅಭಿವೃದ್ಧಿಗೆ ಬದ್ಧನಿರುವೆ. ಸಮಾಜಗಳ ಅಶೋತ್ತರಗಳಿಗೆ ಸ್ಪಂದಿಸುವ ಮೂಲಕ ಎಲ್ಲ ಸಮುದಾಯಗಳಿಗೆ ಬೆನ್ನಲಬು ಆಗಿ ಕೆಲಸ ಮಾಡುತ್ತೇನೆ ಎಂದು ಶಾಸಕ, ಕಹಾಮ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಅವರು, ತಾಲೂಕಿನ ಸುಣಧೋಳಿ ಗ್ರಾಮದಲ್ಲಿ ರವಿವಾರದಂದು ಜರುಗಿದ ಭಕ್ತ ಕನಕದಾಸರ 536ನೇ ಜಯಂತಿ ಉತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಎಲ್ಲ ಸಮುದಾಯಗಳ ಆಶೀರ್ವಾದದಿಂದ ಕಳೆದ ಸಾರ್ವತ್ರಿಕ ಚುನಾವಣೆಯಲ್ಲಿ ದಾಖಲೆಯ ಮತಗಳ ಅಂತರದಿಂದ ಜಯಗಳಿಸಿದ್ದಾಗಿ ಅವರು ತಿಳಿಸಿದರು.

ಸಮಾಜದ ಅಭಿವೃದ್ಧಿಯಲ್ಲಿ ಶಿಕ್ಷಣ,ಸಂಘಟನೆ ಮತ್ತು ಹೋರಾಟ ಅಗತ್ಯವಾಗಿದೆ. ಇವುಗಳನ್ನು ಮೈಗೂಡಿಸಿಕೊಂಡರೆ ಸಮಾಜದಲ್ಲಿ ಮುಂದೆ ಬರಲು ಸಾಧ್ಯವಾಗುತ್ತದೆ. ಶಿಕ್ಷಣದಿಂದ ಸಮಾಜ ಪರಿವರ್ತನೆ ಹೊಂದಲು ಸಾಧ್ಯವೆಂದು ಹೇಳಿದರು.

ಕಳೆದ ಚುನಾವಣೆಯಲ್ಲಿ ಹಾಲುಮತ ಸಮಾಜ ಬಾಂಧವರು ತಮ್ಮ ಜಾತಿಯ ಅಭ್ಯರ್ಥಿ ನೋಡದೇ ನನ್ನನ್ನು ಗೆಲ್ಲಿಸಿದ್ದಾರೆ. ಕುರುಬ ಸಮಾಜದವರೊಬ್ಬರು ಕ್ಷೇತ್ರದಿಂದ ಕಾಂಗ್ರೇಸ್ ಅಭ್ಯರ್ಥಿಯಾಗಿದ್ದರೂ ಇದಾವದನ್ನು ಲೆಕ್ಕಿಸದೇ ಸಮಾಜದವರು ನನಗೆ ಅಮೂಲ್ಯ ಮತ ನೀಡಿ ಗೆಲ್ಲಿಸಿ ಕೊಟ್ಟಿದ್ದಾರೆ. ಹಾಲುಮತ ಕುರುಬ ಸಮಾಜ ಸೇರಿದಂತೆ ಎಲ್ಲ ಸಮಾಜಗಳು ನನಗೆ ಬೆಂಬಲ ನೀಡಿದ್ದಾರೆ. ಈ ಎಲ್ಲ ಸಮಾಜಗಳ ಬಾಂಧವರಿಗೆ ನಮನ ಸಲ್ಲಿಸುವುದಾಗಿ ಅವರು ತಿಳಿಸಿದರು.

ಮೂಡಲಗಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಸಮುದಾಯ ಭವನ ನಿರ್ಮಾಣಕ್ಕೆ ಅಗತ್ಯ ನೆರವು ನೀಡಲಾಗುವುದು. ಇದರ ಜೊತೆಗೆ ಆಯಾ ಸಮಾಜಗಳ ಬೇಡಿಕೆಗಳಿಗೂ ಸ್ಪಂದಿಸುವ ಕೆಲಸ ಮಾಡಲಾಗುವುದು ಎಂದು ಹೇಳಿದರು.

2019ರಲ್ಲಿ ಸಂಭವಿಸಿದ ಪ್ರವಾಹ ಸಂದರ್ಭದಲ್ಲಿ ಅರಭಾವಿ ಮತಕ್ಷೇತ್ರದ ನದಿತೀರದ ಗ್ರಾಮಗಳಿಗೆ ಸುಮಾರು 9 ಸಾವಿರ ಮನೆಗಳನ್ನು ನಿರ್ಮಿಸಲಾಗಿದೆ. ಇದು ಬಿಜೆಪಿ ಸರ್ಕಾರದಲ್ಲಿ ನನಗೆ ನೀಡಿರುವ ಅತ್ಯಧಿಕ ಮನೆಗಳಾಗಿವೆ ಆದರೂ ಇನ್ನೂ ಕೆಲವರು ಮನೆಗಳ ವಿಷಯದಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಶೇ.90ರಷ್ಟು ಒಳ್ಳೇಯ ಕಾರ್ಯಗಳನ್ನು ಮಾಡಿದರೂ ಕೆಲವರಿಗೆ ಸಹಿಸಲು ಆಗುತ್ತಿಲ್ಲ ಎಂದು ಹೇಳಿದರು.

ಇಂದಿನ ಯುವ ಪೀಳಿಗೆಗೆ ಹಿಂದಿನ ಗತಕಾಲದ ಇತಿಹಾಸ, ವೈಭವ ಪರಂಪರೆಯನ್ನು ತಿಳಿಸಬೇಕಾಗಿದೆ. ಮಹಾನ್ ಪುರುಷರ ತತ್ವಾದರ್ಶಗಳನ್ನು ಕೂಡಾ ಅವರಿಗೆ ತಿಳಿಸಿ ಜಾಗೃತಿಗೊಳಿಸಬೇಕಾಗಿದೆ.

> ದೇವರ ಆಶೀರ್ವಾದ ಹಾಗೂ ಜನರ ಬೆಂಬಲದಿಂದ ನಮ್ಮ ಜಾರಕಿಹೊಳಿ ಸಾಮ್ರಾಜ್ಯವನ್ನು ಅಲುಗಾಡಿಸಲು ಯಾರಿಂದಲೂ ಸಾಧ್ಯವಿಲ್ಲ. ಕಳೆದ ಮೂರು ದಶಕಗಳಿಂದ ಜನರ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸಿ ಅವರಿಗೆ ಶಕ್ತಿಯಾಗಿ ನಾವು ನಂತಿದ್ದೇವೆ. ಜನರು ಕೂಡಾ ನಮ್ಮೊಂದಿಗೆ ಕೈ ಜೋಡಿಸುತ್ತಿದ್ದಾರೆ. ಎಲ್ಲ ಸಮಾಜಗಳಿಗೂ ರಾಜಕೀಯ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ,ಧಾರ್ಮಿಕ ಮುಂತಾದ ಸೌಲಭ್ಯಗಳನ್ನು ದೊರಕಿಸಿ ಕೊಟ್ಟಿದ್ದೇವೆ. ನಮ್ಮಿಂದ ಯಾವ ಸಮಾಜಕ್ಕೂ ಅನ್ಯಾಯವಾಗಿಲ್ಲ. ನಮ್ಮ ಜಾರಕಿಹೊಳಿ ಸಾಮ್ರಾಜ್ಯವನ್ನು ಕೆಡವಲು ಕೆಲವರು ಇನ್ನಿಲ್ಲದ ಪ್ರಯತ್ನ ಮಾಡುತ್ತಾ ಸೋಲುತ್ತಲೇ ಇದ್ದಾರೆ. ನಮಗಿರುವ ಜನ ಬೆಂಬಲದಿಂದ ಈಗ ಅವರು ತಣ್ಣಗಾಗಿದ್ದಾರೆ.
>
> –ಬಾಲಚಂದ್ರ ಜಾರಕಿಹೊಳಿ ಶಾಸಕರು ಅರಭಾವಿ

ಈ ಹಿನ್ನಲೆಯಲ್ಲಿ ಆಯಾ ಸಮಾಜಗಳಿಗೆ ಸೇರಿರುವ ಮಹಾನ್ ಪುರುಷರ ಜಯಂತಿ ಕಾರ್ಯಕ್ರಮಗಳನ್ನು ಪ್ರತಿವರ್ಷವೂ ಆಯೋಜನೆ ಮಾಡಲಾಗುತ್ತಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು. ಕಾರ್ಯಕ್ರಮದ ದಿವ್ಯ ಸಾನಧ್ಯವನ್ನು ಸುಣಧೋಳಿಯ ಶಿವಾನಂದ ಮಹಾಸ್ವಾಮಿಗಳು, ಕವಲಗುಡ್ಡದ ಅಮರೇಶ್ವರ ಮಹಾರಾಜರು ವಹಿಸಿ ಆಶೀರ್ವಚನ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರದೇಶ ಕುರುಬರ ಸಂಘದ ನಿರ್ದೇಶಕ ರಾಜೇಂದ್ರ ಸಣ್ಣಕ್ಕಿ ಅವರು ನಮ್ಮ ಸಮಾಜವು ಅತ್ಯಂತ ವಿಶ್ವಾಸಾರ್ಹವಾಗಿದೆ. ನಮ್ಮ ಸಮಾಜಕ್ಕೆ ಸಿಎಂ ಸಿದ್ಧರಾಮಯ್ಯನವರು ಪ್ರಶ್ನಾತೀತ ನಾಯಕರು. ಇಡೀ ಕುರುಬ ಸಮಾಜವು ಅವರ ಬೆಂಬಲಕ್ಕಿದೆ. ಜೊತೆಗೆ ಜಾರಕಿಹೊಳಿ ಸಹೋದರರೊಂದಿಗೆ ನಾವೆಲ್ಲರೂ ಗುರುತಿಸಿಕೊಂಡಿದ್ದೇವೆ. ನಮ್ಮ ಸಮಾಜಕ್ಕೆ ಜಾರಕಿಹೊಳಿ ಸಹೋದರರು ದೊಡ್ಡ ಶಕ್ತಿಯಾಗಿದ್ದಾರೆ ಎಂದು ಹೇಳಿದರು.

ವೇದಿಕೆಯಲ್ಲಿ ಕಳ್ಳಿಗುದ್ದಿ–ಕಪರಟ್ಟಿಯ ಬಸವರಾಜ ಸ್ವಾಮಿಗಳು ಹಿರೇಮಠ, ಜೋಕಾನಟ್ಟಿಯ ಬಿಳಿಯಾನಸಿದ್ಧ ಸ್ವಾಮಿಗಳು, ಯುವ ಮುಖಂಡ ಸರ್ವೋತ್ತಮ ಜಾರಕಿಹೊಳಿ, ಮುಖಂಡರಾದ ವಿಠ್ಠಲ ಪಾಟೀಲ, ಕೆಂಚನಗೌಡ ಪಾಟೀಲ, ಡಾ: ಎಸ್.ಎಸ್.ಪಾಟೀಲ, ಭೀಮಶಿ ಮಗದುಮ್, ಲಕ್ಷ್ಮಣ ಮಸಗುಪ್ಪಿ, ಶಿವನಗೌಡ ಪಾಟೀಲ, ಬಸಗೌಡ ಪಾಟೀಲ, ರಾಮಣ್ಣ ಮಹಾರಡ್ಡಿ, ಮನು ಗಡಾದ, ಸಿದ್ಧಲಿಂಗಪ್ಪ ಕಂಬಳಿ, ಅಜ್ಜಪ್ಪ ಗಿರಡ್ಡಿ, ಗಿರೀಶ ಹಳ್ಳೂರ, ರಂಗಪ್ಪ ಇಟ್ಟನ್ನವರ, ಹಣಮಂತ ಗುಡ್ಲಮನ, ಲಕ್ಷ್ಮಣ ಗಣಪ್ಪಗೋಳ, ಶಂಕರ ಬಿಲಕುಂದಿ, ಅಡಿವೆಪ್ಪ ಅಳಗೋಡಿ, ಮಲ್ಲಿಕಾರ್ಜುನ ವಡೇರ ಸೇರಿದಂತೆ ವಿವಿಧ ಸಮಾಜಗಳ ಮುಖಂಡರು ಉಪಸ್ಥಿತರಿದ್ದರು.ಇದೇ ಸಂದರ್ಭದಲ್ಲಿ ಕುರುಬ ಸಮಾಜದ ಗ್ರಾ.ಪಂ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಸಮಾಜದ ಅಧಿಕಾರಿಗಳನ್ನು ಕಾರ್ಯಕ್ರಮದಲ್ಲಿ ಸತ್ಕರಿಸಲಾಯಿತು.

ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ಅದ್ದೂರಿಯಾಗಿ ಮೆರವಣಿಗೆ ಮೂಲಕ ಸಮಾರಂಭದ ವೇದಿಕೆಗೆ ಕರೆ ತರಲಾಯಿತು. ಸುಣಧೋಳಿ ಗ್ರಾಮವು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಮುಖಂಡರು ಶಾಸಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸದಾಶಿವ ಆಯೋಗ ವರದಿ ಜಾರಿ ಬೇಡ: ಷ್ಟ್ರೀಯ ಸೇವಾಲಾಲ್ ಸೇನಾ ಸಂಘಟನೆ ಒತ್ತಾಯ

ಗದಗ: ನ್ಯಾಮೂ ಎ.ಜೆ ಸದಾಶಿವ ಆಯೋಗವು ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಜಾತಿಗಳಲ್ಲಿ ನಾಲ್ಕು ಭಾಗಗಳನ್ನಾಗಿ ಮಾಡಿ, ಈ ಪೈಕಿ ಕೇವಲ ಮೂರು ಭಾಗಗಳಿಗೆ ಮಾತ್ರ ಮೀಸಲಾತಿಯನ್ನು ನೀಡಿ, ಉಳಿದ ಒಂದು ಭಾಗಕ್ಕೆ ಸೇರಿದ ಜಾತಿಯವರನ್ನು ಪರಿಶಿಷ್ಟ ಜಾತಿಯಿಂದ ಕೈಬಿಡುವಂತೆ ಶಿಫಾರಸು ಮಾಡಿದ್ದು ಲಂಬಾಣಿ ಸೇರಿ ಹಲವು ಸಮುದಾಯಕ್ಕೆ ಅನ್ಯಾಯವಾಗಲಿದೆ. ಹೀಗಾಗಿ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಈ ವರದಿ ಜಾರಿಗೆ ಮುಂದಾಗಬಾರದು ಎಂದು ರಾಷ್ಟ್ರೀಯ ಸೇವಾಲಾಲ್ ಸೇನಾ ಸಂಘಟನೆ ಒತ್ತಾಯಿಸಿದೆ.ಎ.ಜೆ ಸದಾಶಿವ ಆಯೋಗವು ಜಾತಿವಾರು ಮೀಸಲಾತಿ ವರ್ಗೀಕರಣದ ವಿರುದ್ಧ ಜಿಲ್ಲಾಡಳಿತ ಭವನ ಎದುರು ರಾಷ್ಟ್ರೀಯ ಸೇವಾಲಾಲ್ ಸೇನಾ ಸಂಘಟನೆ ಬೃಹತ್ ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 1919 ರಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವಂತ ಬಂಜಾರ ಸಮುದಾಯದ ಮೀಸಲಾತಿಯನ್ನು ಹಾಗೂ ಡಾ.ಬಿ.ಆರ್ ಅಂಬೇಡ್ಕರ್ ಅವರು 101 ಜಾತಿಗಳನ್ನ ಅಸ್ಪೃಶ್ಯ ಜಾತಿಗಳೆಂದು 1936ರ ಪರಿಶಿಷ್ಟ ಜಾತಿ ಆದೇಶದ ಪಟ್ಟಿ ಮೇರೆಗೆ ಸಂವಿಧಾನದ ವಿಧಿ 341(ಂ) ರಾಜ್ಯಗಳಲ್ಲಿ ರಾಜ್ಯಪಾಲರಿಂದ ರಾಳ್ಳದಲ್ಲಿ ರಾಳ್ಳಪತಿಗಳಿಂದ ಅಧಿಕೃತ ಆದೇಶದ ಮೇರೆಗೆ ಶಾಸನಬದ್ಧವಾಗಿ ಸಂವಿಧಾನದಲ್ಲಿ ನಮೂದಿಸ'ಲಾಗಿದೆ. ಆದರೆ ನ್ಯಾಮೂ ಎ.ಜೆ ಸದಾಶಿವ ಆಯೋಗವು 101 ಜಾತಿಗಳಲ್ಲಿ ನಾಲ್ಕು ಭಾಗಗಳನ್ನಾಗಿ ಮಾಡಿ ಕೇವಲ ಮೂರರಳ್ಳು ಮೀಸಲಾತಿಯನ್ನು ನೀಡಿ ಪರಿಶಿಷ್ಟ ಜಾತಿಯಿಂದ ಕೈಬಿಡುವ ಶಿಫಾರಸ್ಸಿನ ಮೂಲಕ ಸಂವಿಧಾನ ವಿರೋಧ ನೀತಿಯನ್ನು ಅನುಸರಿಸಿರುತ್ತಾರೆ. ಇದರ ಮಧ್ಯೆ ರಾಜ್ಯದ ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್ ಮುನಿಯಪ್ಪ ಅವರು 'ಸದಾಶಿವ ಆಯೋಗ ಜಾರಿಗೆ ಮಾಡುವಂತೆ ನಮ್ಮ ಕ್ಷೇತ್ರದ ಶಾಸಕರ ಮೇಲೆ ಮುತ್ತಿಗೆಯನ್ನು ಹಾಕಿ ಎಂಬ ಅವರ ಹೇಳಿಕೆ ಖಂಡನೀಯ. ಅಲ್ಲದೇ, ಗೃಹ ಸಚಿವರಾದ ಡಾ.ಜಿ ಪರಮೇಶ್ವರ್ ಅವರು ಬೆಳಗಾವಿ ಅಧಿವೇಶನದಲ್ಲಿ ಸದಾಶಿವ ಆಯೋಗ ವರದಿಯನ್ನು ಜಾರಿಗೆ ಮಾಡುವ ಕುರಿತು ನೀಡಿರುವ ಹೇಳಿಕೆ ವಿರುದ್ಧ ನಮ್ಮ ಪ್ರತಿಭಟನೆ. ಕೂಡಲೇ ಅವರು ತಮ್ಮ ಹೇಳಿಕೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು .ಬಂಜಾರ ಸಮುದಾಯಕ್ಕೆ ಅನ್ಯಾಯ ಮಾಡುತ್ತಿರುವ ಎ. ಜೆ ಸದಾ ಶಿವ ಆಯೋಗದ ಅವೈಜ್ಞಾನಿಕ ವರದಿಯನ್ನು ಯಾವುದೇ ಕಾರಣಕ್ಕೂ ಒಪ್ಪಬಾರದು ಎಂದು ಒತ್ತಾಯಿಸಿದರು. ರಾಷ್ಟ್ರೀಯ ಸೇವಾಲಾಲ್ ಸೇನಾ ಅಧ್ಯಕ್ಷ ಕೃಷ್ಣಪ್ಪ ಲಮಾಣಿ ರವರ ನೇತೃತ್